ರಾಜ್ಯದಲ್ಲಿ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ಬಸ್ ನಿಲ್ದಾಣಗಳಲ್ಲಿ ಸರಿಯಾದ ವ್ಯವಸ್ಥೆ ಇಲ್ಲದಿರುವುದು

೧೫೪೪ ಶ್ರೀ ಎಂ. ಶಿವಣ್ಣ (ಹೆಗಡೆದೇವನಕೋಟೆ).—ಮಾನ್ಯ ಸಾರಿಗೆ ವಸತಿ ಮತ್ತು ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ರಾಜ್ಯದಲ್ಲಿನ ರಸ್ತೆ ಸಾರಿಗೆ ಸಂಸ್ಥೆಯ ಬಸ್ ನಿಲ್ದಾಣಗಳ ಕಟ್ಟಡದಿಂದ ರುವ ಆದಾಯ ಎಷ್ಟು ?

ಆ) ಬಹುತೇಕ ಬಸ್ ನಿಲ್ದಾಣಗಳಲ್ಲಿ ಶೌಚ ಗೃಹಗಳು ಕುಡಿಯುವ ನೀರಿನ ವ್ಯವಸ್ಥೆ ಸರಿಯಾಗಿಲ್ಲ ದಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ :

ಇ) ಬಂದಿದ್ದಲ್ಲಿ ಆ ಬಗ್ಗೆ ಕೈಗೊಂಡಿರುವ ಕ್ರಮಗಳೇನು ;

ಈ) ಮೈಸೂರು ನಗರದ ಬಸ್ ನಿಲ್ದಾಣದ ಕಟ್ಟಡ ಬಿರುಕು ಬಿಟ್ಟಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ ;

ಉ) ಬಂದಿದ್ದಲ್ಲಿ ಆ ಬಗ್ಗೆ ಸರ್ಕಾರದವರು ಕೈಗೊಳ್ಳಲಿರುವ ಕ್ರಮಗಳೇನು;

ಊ) ಈ ನಿಲ್ದಾಣದಲ್ಲಿ ಪದೇ ಪದೇ ದುರಸ್ತಿ ಕೆಲಸ ಮಾಡುತ್ತಿರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ :

ಋ) ಈ ಕೆಲಸವನ್ನು ಯಾವಾಗ ಪೂರ್ಣಗೊಳಿಸಲಾಗುವುದು ?

ಶ್ರೀ ಪಿ.ಜಿ.ಆರ್. ಸಿಂಧ್ಯ (ಸಾರಿಗೆ ಮತ್ತು ವಸತಿ ರಾಜ್ಯ ಮಂತ್ರಿಗಳು).—

ಅ) ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯು ವಾಹನ ನಿಲ್ದಾಣಗಳ ಕಟ್ಟಡಗಳಲ್ಲಿರುವ ವಾಣಿಜ್ಯ ಮಳಿಗೆಗಳು, ಉಪಹಾರ ಗೃಹ, ಪಾನ್ ಬೀಡಾ ಸ್ಟಾಲ್, ಹಣ್ಣಿನ ಅಂಗಡಿಗಳಿಂದ ಸಂಸ್ಥೆಗೆ ಬರುವ ವಾರ್ಷಿಕ ಆದಾಯ ಸುಮಾರು ೬೫,೦೦,೦೦೦ ಲಕ್ಷ ರೂ. ಗಳಾಗಿರುತ್ತದೆ.

ಆ) ಬಹುತೇಕ ಬಸ್ ನಿಲ್ದಾಣಗಳಲ್ಲಿ ಕುಡಿಯುವ ನೀರಿನ ಹಾಗೂ ಶೌಚಗೃಹಗಳ ವ್ಯವಸ್ಥೆ ಸಾಧ್ಯವಾದಷ್ಟು ಮಾಡಲಾಗಿದೆ. ಆದಾಗ್ಯೂ ಕೆಲವು ಬಸ್ ನಿಲ್ದಾಣಗಳಲ್ಲಿ, ಕೊಳವೆ ಬಾವಿಗಳ ಮೂಲಕ ಆಥವಾ ಸ್ಥಳೀಯ ಸಂಸ್ಥೆಗಳಿಂದ ಸಾಕಷ್ಟು ನೀರು ಸರಬರಾಜು ದೊರೆಯದೆ ಇದ್ದುದರಿಂದ ಶೌಚಗೃಹಗಳ ಸ್ವಚ್ಛತೆಯನ್ನು ಕಾಪಾಡಲು ಸಾಧ್ಯವಾಗಿಲ್ಲ.

ಇ) ಬಸ್ ನಿಲ್ದಾಣಗಳಲ್ಲಿರುವ ಶೌಚಾಲಯಗಳನ್ನು ನವೀಕರಿಸಲು ಹಾಗೂ ಕುಡಿಯುವ ನೀರಿನ ವ್ಯವಸ್ಥೆಯನ್ನು ಉತ್ತಮಪಡಿಸಲು ಹಂತಹಂತವಾಗಿ ಕ್ರಮ ಕೈಗೊಳ್ಳಲಾಗುತ್ತಿದೆ.

ಈ) ಮೈಸೂರು ನಗರದ ಬಸ್ ನಿಲ್ದಾಣದ ಮುಖ್ಯ ಕಟ್ಟಡದಲ್ಲಿ ಕೊಠಡಿಗಳನ್ನು ಬೇರ್ಪಡಿಸುವ ಗೋಡೆ (ಪಾರ್ಟಿಶನ್‌ವಾಲ್) ಅತಿ ಸೂಕ್ಷ್ಮವಾಗಿ ಬಿರುಕುಬಿಟ್ಟಿರುವುದು ಗಮನಕ್ಕೆ ಬಂದಿದೆ.

ಉ) ಬಿರುಕುಬಿಟ್ಟಿರುವ ಭಾಗವನ್ನು ದುರಸ್ತಿ ಮಾಡಲು ಈಗಾಗಲೇ ಕ್ರಮ ಕೈಗೊಳ್ಳಲಾಗಿದೆ.

ಊ) ಬಸ್ ನಿಲ್ದಾಣದಲ್ಲಿ ಕೆಲವು ಅವಶ್ಯಕವಾದ ಹಾಗೂ ಹೆಚ್ಚಿನ ಸೌಲಭ್ಯಗಳನ್ನು ಒದಗಿಸುವ ಸಲುವಾಗಿ ಕಾಮಗಾರಿ ಕೆಲಸವನ್ನು ಏನೇ ಹಂತದಲ್ಲಿ ಕೈಗೊಳ್ಳಲಾಗಿದ್ದು ಇದರಿಂದ ಸಾರ್ವಜನಿಕರಿಗೆ ತೊಂದರೆಯಾಗದಂತೆ ಕಾಮಗಾರಿ ಕೆಲಸಗಳನ್ನು ನಿರ್ವಹಿಸಲಾಗುತ್ತಿದೆ.

ಋ) ೨ ತಿಂಗಳ ಅವಧಿಯಲ್ಲಿ ಪೂರ್ಣಗೊಳಿಸಲಾಗುವುದು.